# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 399 (555)
2. ಉತ್ತರಿಸುವ ದಿನಾಂಕ : 12-12-2024
3. ಸದಸ್ಯರ ಹೆಸರು : ಶ್ರೀ ಮಧು.ಜಿ.ಮಾದೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)
4. ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | 2023ನೇ ಸಾಲಿನ ಜಿಲ್ಲಾ ಮತ್ತು ರಾಜ್ಯ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗಳನ್ನು ಈವರೆವಿಗೂ ನೀಡದಿರುವುದಕ್ಕೆ ಕಾರಣಗಳೇನು; ಪ್ರಶಸ್ತಿಯನ್ನು ಯಾವಾಗ ನೀಡಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು). | 2023ನೇ ಸಾಲಿನ ಜಿಲ್ಲಾ ಮತ್ತು ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ನಾಮ ನಿರ್ದೇಶನವನ್ನು ಆಹ್ವಾನಿಸಿದಾಗ ಕಡಿಮೆ ಪ್ರಮಾಣದಲ್ಲಿ ನಾಮ ನಿರ್ದೇಶನವನ್ನು ಸ್ವೀಕರಿಸಲಾಯಿತು. ಇದರಿಂದಾಗಿ, 4-5 ಬಾರಿ ಕಾಲಾವಕಾಶವನ್ನು ವಿಸ್ತರಿಸಲಾಯಿತು. ವಿಧಾನ ಸಭೆ ಮತ್ತು ಲೋಕಸಭೆ ಚುನಾವಣೆ ಹಿನ್ನೆಲೆ ಹಾಗೂ ಆಯ್ಕೆ ಸಮಿತಿಯು ಹೆಚ್ಚುವರಿ ಮಾಹಿತಿಯನ್ನು ಕೋರಿದ ಹಿನ್ನೆಲೆಯಲ್ಲಿ, ಆಮೂಲಾಗ್ರವಾಗಿ ನಾಮ ನಿರ್ದೇಶನಗಳನ್ನು ಪರಿಶೀಲಿಸಿ, ಅಂತಿಮಗೊಳಿಸಲು ಕಾಲಾವಕಾಶ ತೆಗೆದುಕೊಳ್ಳಲಾಗಿದೆ.<br><br>ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ನೇತೃತ್ವದ ಸಮಿತಿ ಮತ್ತು ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ಜಿಲ್ಲಾ ಕಾರ್ಯದರ್ಶಿಗಳ ನೇತೃತ್ವದ ಸಮಿತಿಯು ಪ್ರಶಸ್ತಿಗಾಗಿ ಸಲ್ಲಿಸಿರುವ ನಾಮ ನಿರ್ದೇಶನಗಳನ್ನು ಪರಿಶೀಲಿಸಿ, ಆಯ್ಕೆ ಮಾಡಿದ ನಂತರ ನೀಡಲಾಗುವುದು. |
| (ಆ) | ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಜಿಲ್ಲಾ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗೆ ಅರ್ಹರ ಪಟ್ಟಿಯನ್ನು ಆಯ್ಕೆ ಸಮಿತಿ ಅಂತಿಮಗೊಳಿಸಿದೆಯೇ; ಹಾಗೂ, ರಾಜ್ಯ ಮಟ್ಟದ ಪ್ರಶಸ್ತಿಗೆ ನಿರ್ದಿಷ್ಟ ಸಂಖ್ಯೆಯ ಅರ್ಹರನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆಯೇ; | 24 ಜಿಲ್ಲೆಗಳು ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಅರ್ಹರ ಪಟ್ಟಿಯನ್ನು ಅಂತಿಮಗೊಳಿಸಿರುತ್ತದೆ ಹಾಗೂ ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಅಧಿಕಾರಿ/ನೌಕರರನ್ನು ಇನ್ನೂ ಅಂತಿಮ ಗೊಳಿಸಿರುವುದಿಲ್ಲ. 31 ಜಿಲ್ಲೆಗಳು ರಾಜ್ಯ ಮಟ್ಟದ ಪ್ರಶಸ್ತಿಗೆ ಅರ್ಹರನ್ನು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ. |

| | | |
|---|---|---|
| (ಇ) | ರಾಜ್ಯ ಮಟ್ಟದಲ್ಲಿ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗೆ ಅಧಿಕಾರಿ / ನೌಕರರನ್ನು ಅಂತಿಮಗೊಳಿಸ ಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು; ಯಾವಾಗ ಅಂತಿಮಗೊಳಿಸಲಾಗುವುದು; (ಮಾಹಿತಿ ನೀಡುವುದು). | ರಾಜ್ಯ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ನಾಮ ನಿರ್ದೇಶನವನ್ನು ಆಹ್ವಾನಿಸಿದಾಗ ಕಡಿಮೆ ಪ್ರಮಾಣದಲ್ಲಿ ನಾಮ ನಿರ್ದೇಶನವನ್ನು ಸ್ವೀಕರಿಸಲಾಯಿತು. ಇದರಿಂದಾಗಿ, 4-5 ಬಾರಿ ಕಾಲಾವಕಾಶವನ್ನು ವಿಸ್ತರಿಸಲಾಯಿತು. ವಿಧಾನಸಭೆ ಮತ್ತು ಲೋಕಸಭೆ ಚುನಾವಣೆ ಹಿನ್ನೆಲೆ ಹಾಗೂ ಆಯ್ಕೆ ಸಮಿತಿಯು ಹೆಚ್ಚುವರಿ ಮಾಹಿತಿಯನ್ನು ಕೋರಿದ ಹಿನ್ನೆಲೆಯಲ್ಲಿ, ಆಮೂಲಾಗ್ರವಾಗಿ ನಾಮ ನಿರ್ದೇಶನಗಳನ್ನು ಪರಿಶೀಲಿಸಿ, ಅಂತಿಮಗೊಳಿಸಲು ಕಾಲಾವಕಾಶ ತೆಗೆದುಕೊಳ್ಳಲಾಗಿದೆ.<br><br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ನೇತೃತ್ವದ ಸಮಿತಿಯು ಸದ್ಯದಲ್ಲಿಯೇ ಸಭೆಯನ್ನು ಆಯೋಜಿಸಿ ಅಂತಿಮಗೊಳಿಸಲಾಗುವುದು. |
| (ಈ) | ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ 'ಸರ್ವೋತ್ತಮ ಸೇವಾ ಪ್ರಶಸ್ತಿ' ಯನ್ನು ಗರಿಷ್ಠ ಎಷ್ಟು ಮಂದಿಗೆ ನೀಡಲು ಅವಕಾಶ ಇದೆ; (ಪ್ರಶಸ್ತಿ, ನಗದು ಪುರಸ್ಕಾರದ ಮೊತ್ತ ಸೇರಿದಂತೆ ಮಾರ್ಗಸೂಚಿಯ ಸಂಪೂರ್ಣ ಮಾಹಿತಿ ನೀಡುವುದು). | ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಮಟ್ಟದ ಗರಿಷ್ಠ 10 ಪ್ರಶಸ್ತಿಗಳನ್ನು ರೂ.25,000ಗಳ ನಗದು ಪುರಸ್ಕಾರದೊಂದಿಗೆ ನೀಡಲಾಗುವುದು.<br><br>ರಾಜ್ಯ ಮಟ್ಟದಲ್ಲಿ ಗರಿಷ್ಠ 30 ಪ್ರಶಸ್ತಿಗಳನ್ನು ರೂ.50,000 ಗಳ ನಗದು ಪುರಸ್ಕಾರದೊಂದಿಗೆ ನೀಡಲಾಗುವುದು.<br><br>ಪ್ರಶಸ್ತಿ, ನಗದು ಪುರಸ್ಕಾರ ಮತ್ತು ಇತರೆ ಮಾರ್ಗಸೂಚಿಗಳನ್ನು ಒಳಗೊಂಡ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ (ಆಸು) 11 ಇಆಸು 2022, ದಿನಾಂಕ: 19-03-2022 ಮತ್ತು ಆದೇಶ ಸಂಖ್ಯೆ: ಸಿಆಸುಇ (ಆಸು) 11 ಇಆಸು 2022, ದಿನಾಂಕ: 19-04-2022ರ ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿದೆ. |
| (ಉ) | 2024ನೇ ಸಾಲಿನ ಜಿಲ್ಲಾ ಮತ್ತು ರಾಜ್ಯ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ' ಗಳಿಗೆ ಎಂದಿನಿಂದ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು). | 2023ನೇ ಸಾಲಿನ ಆಯ್ಕೆ ಪಟ್ಟಿ ಅಂತಿಮಗೊಂಡ ನಂತರ 2024ನೇ ಸಾಲಿನ ಜಿಲ್ಲಾ ಮತ್ತು ರಾಜ್ಯ ಮಟ್ಟದ 'ಸರ್ವೋತ್ತಮ ಸೇವಾ ಪ್ರಶಸ್ತಿ'ಗೆ ಅರ್ಜಿಯನ್ನು ಆಹ್ವಾನಿಸುವ ಕುರಿತು ಸರ್ಕಾರದ ಹಂತದಲ್ಲಿ ತೀರ್ಮಾನಿಸಲಾಗುವುದು. |

**ಸಂಖ್ಯೆ: ಸಿಆಸುಇ (ಆಸು) 228 ಇಆಸು 2024**

(ಸಿದ್ದರಾಮಯ್ಯ)
ಮುಖ್ಯಮಂತ್ರಿ.